ಆ) ಬಂದಿದ್ದಲ್ಲಿ, ಅದರ ಪುನಃಶ್ಚೇತನಕ್ಕೆ ಸರ್ಕಾರ ತೆಗೆದು ಕೊಂಡಿರುವ ಕ್ರಮಗಳೇನು?

ಶ್ರೀ ವೆಂಕಟರಮಣಪ್ಪ (ಸಣ್ಣ ಕೈಗಾರಿಕೆ ಮತ್ತು ರೇಷ್ಮೆ ಸಚಿವರು) :

ಅ) ಕೊಳ್ಳೇಗಾಲ ತಾಲ್ಲೂಕಿನಲ್ಲಿ 2007–08ನೇ ಸಾಲಿನ ಮಾರ್ಚ್ ಅಂತ್ಯಕ್ಕೆ ಹಿಪ್ಪುನೇರಳೆ ವಿಸ್ತೀರ್ಣ 1088 ಹೆಕ್ಟೇರ್‌ಗಳಿದ್ದದ್ದು 2008–09ನೇ ಮಾರ್ಚ್ ಅಂತ್ಯಕ್ಕೆ 456 ಹೆಕ್ಟೇರುಗಳಿಗೆ ಇಳಿಮುಖವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ರೇಷ್ಮೆ ಇಲಾಖೆಯು ಕೇಂದ್ರ ರೇಷ್ಮೆ ಮಂಡಳಿಯ ಸಹಯೋಗದ ಕೆಟಲಿಟಿಕ್ ಅಭಿವೃದ್ಧಿ ಯೋಜನೆ, ರಾಜ್ಯ ಸರ್ಕಾರದ ವತಿಯಿಂದ ರೇಷ್ಮೆ ವರದಾನ ಯೋಜನೆ, ವಿಶೇಷ ಘಟಕ ಯೋಜನೆ, ಗಿರಿಜನ ಉಪಯೋಜನೆ, ಜಿಲ್ಲಾ/ತಾಲ್ಲೂಕು ಪಂಚಾಯತ್ ಕಾರ್ಯಕ್ರಮಗಳು ಹಾಗೂ ರೇಷ್ಮೆ ಹುಳು ಸಾಕಾಣಿಗೆ ಚಟುವಟಿಕೆ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಗಳಲ್ಲಿ ರೇಷ್ಮೆ ಬೆಳೆಗಾರರಿಗೆ ಹಾಗೂ ನೂಲು ಬಿಚ್ಚಾಣಿಕೆದಾರರಿಗೆ ಸಹಾಯಧನ/ ಪ್ರೋತ್ಸಾಹಧನ ನೀಡಿ, ಕೊಳ್ಳೇಗಾಲ ತಾಲ್ಲೂಕು ಸೇರಿದಂತೆ ಒಟ್ಟಾರೆ ರಾಜ್ಯದಲ್ಲಿ ರೇಷ್ಮೆ ಕೃಷಿಯ ಪುನಃಶ್ಚೇತನಕ್ಕಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.

328 ಶ್ರೀ ಪ್ರತಾಪಗೌಡ ಪಾಟೀಲ್ (ಮಸ್ಕಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೆರೆ ಹಾವಳಿ ಪೀಡಿ ಗ್ರಾಮಗಳನ್ನು ಸ್ಥಳಾಂತರಿಸುವಾಗ ಪ್ರತಿಯೊಂದು ಕುಟುಂಬಕ್ಕೂ ಪ್ರತ್ಯೇಕ ಮನೆಗಳನ್ನು ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ?

ಶ್ರೀ ಜೆ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ನೆರೆ ಹಾವಳಿ ಪೀಡಿತ ಗ್ರಾಮಗಳನ್ನು ಸ್ಥಳಾಂತರಿಸುವಾಗ ಪ್ರತಿ ಹಾನಿಗೊಳಗಾದ ಮನೆಗೆ 30 X 50 ನಿವೇಶನದಲ್ಲಿ ರೂ. 1.00 ಲಕ್ಷದಲ್ಲಿ ಮನೆ ಕಟ್ಟಿಸಿಕೊಡಲು ಕ್ರಮ ಕೈಗೊಳ್ಳಲಾಗುತ್ತಿದೆ.